ಕರ್ನಾಟಕ ಸರ್ಕಾರ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ/6/ಇಸಿಎಸ್(1)/2023

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು-560001
ದಿನಾಂಕ:26.10.2023

## ಸುತ್ತೋಲೆ

ವಿಷಯ: ಡಿಸೆಂಬರ್ 2023 ರ ಡಿಪ್ಲೋಮ ಸೆಮಿಸ್ಟರ್ ಪರೀಕ್ಷೆಗೆ ನೋಂದಾಯಿಸಿರುವ ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಹಾಗೂ ಥಿಯರಿ ಪರೀಕ್ಷೆಗಳ ವೇಳಾಪಟ್ಟಿಗಳನ್ನು ಪ್ರಕಟಿಸುವ ಕುರಿತು.

ಉಲ್ಲೇಖ: 1. ಮಾನ್ಯ ಆಯುಕ್ತರ ಕಛೇರಿ ಸುತ್ತೋಲೆ ಸಂಖ್ಯೆ:DTE-ADMI0ACM/61/2023 ದಿನಾಂಕ:20.10.2023
2. ದಿನಾಂಕ:25.07.2023 ರಂದು ಜರುಗಿದ ತಾಂತ್ರಿಕ ಪರೀಕ್ಷಾ ಮಂಡಳಿಯ 184ನೇ ವಿಶೇಷ ಕೇಂದ್ರ ಸಭೆಯ ನಿರ್ಣಯ 184.8

***********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ (1) ರ ಈ ಕಛೇರಿ ಸುತ್ತೋಲೆಯನುಸಾರ C-20 ಪಠ್ಯಕ್ರಮದ ಪ್ರಾಯೋಗಿಕ ಪರೀಕ್ಷೆಗಳು **ದಿನಾಂಕ:02.12.2023 ರಿಂದ 15.12.2023 ರವರೆಗೆ ಜರುಗಲಿದ್ದು**, C-20 ಪಠ್ಯಕ್ರಮದ ಥಿಯರಿ ಪರೀಕ್ಷೆ (SEE) ಗಳನ್ನು **ದಿನಾಂಕ:18.12.2023ರಿಂದ 04.01.2024 ರವರೆಗೆ** ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್ ಪರೀಕ್ಷಾ ಕೇಂದ್ರಗಳಲ್ಲಿ (ಬೇರೆ ಪರೀಕ್ಷಾ ಕೇಂದ್ರ ಗಳಿಗೆ ಜೋಡಣೆಯಾದ ಸಂಸ್ಥೆ/ ಕೇಂದ್ರಗಳನ್ನು ಹೊರತುಪಡಿಸಿ) ಜರುಗಿಸಲಾಗುವುದು.

ಹಳೆ ಪಠ್ಯಕ್ರಮಗಳ (ಉದಾ:C-15) ಥಿಯರಿ ಪರೀಕ್ಷೆಗಳನ್ನು ಪ್ರಾಯೋಗಿಕ ಪರೀಕ್ಷೆಗಳು ನಡೆಯುವ ಅವಧಿಯಲ್ಲಿ (ದಿನಾಂಕ:02.12.2023 ರಿಂದ 15.12.2023 ರವರೆಗೆ) ಉಲ್ಲೇಖ(2) ರ ತಾಂತ್ರಿಕ ಪರೀಕ್ಷಾ ಮಂಡಳಿಯ ವಿಶೇಷ ಕೇಂದ್ರ ಸಭೆಯ ನಿರ್ಣಯದಂತೆ **ಸರ್ಕಾರಿ ಪಾಲಿಟೆಕ್ನಿಕ್ ಪರೀಕ್ಷಾ ಕೇಂದ್ರಗಳಲ್ಲಿ ಮಾತ್ರ** ನಡೆಸಲಾಗುವುದು (**Makeup SEE** ಥಿಯರಿ ಪರೀಕ್ಷೆಗಳನ್ನು ನಡೆಸಲಾದ ರೀತಿಯಲ್ಲಿ Online Question Paper ವಿತರಿಸಲಾಗುವುದು).

ಪ್ರಯುಕ್ತ ಡಿಸೆಂಬರ್ 2023 ರ ಡಿಪ್ಲೋಮ ಸೆಮಿಸ್ಟರ್ ಪರೀಕ್ಷೆಗೆ ನೋಂದಾಯಿಸಿರುವ ವಿದ್ಯಾರ್ಥಿಗಳ ವಿವರಗಳನ್ನು ಬಿಟಿಇಲಿಂಕ್ಸ್ ವೆಬ್ ಪೋರ್ಟಲ್ ನಲ್ಲಿ (Candidate list) ಇಂದೀಕರಿಸಲು ಮತ್ತು 2023-24ನೇ ಶೈಕ್ಷಣಿಕ ಸಾಲಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಆಂತರಿಕ ಅಂಕಗಳನ್ನು ನಿಯಮಾನುಸಾರ ಆಂತರಿಕ ಅಂಕಗಳ ವಹಿಯಲ್ಲಿ ನಮೂದಿಸಿ ಆಂತರಿಕ ಅಂಕಗಳ ಪರಿವೀಕ್ಷಕರಿಂದ ಪರಿಶೀಲಿಸಲ್ಪಟ್ಟ ನಂತರ ಬಿಟಿಇಲಿಂಕ್ಸ್ ವೆಬ್ ಪೋರ್ಟಲ್ ಮುಖಾಂತರ ಆನ್ ಲೈನ್ ನಲ್ಲಿ ಅಪ್ ಲೋಡ್ ಮಾಡಲು ಸೂಚಿಸಲಾಗಿದೆ

ಪ್ರಾಯೋಗಿಕ ಹಾಗೂ ಥಿಯರಿ ಪರೀಕ್ಷೆಗಳನ್ನು ಬಿಟಿಇಲಿಂಕ್ಸ್ ನಲ್ಲಿ ಪ್ರಕಟಿಸಲಾಗುವ ವೇಳಾಪಟ್ಟಿಯನುಸಾರ ನಡೆಸಲಾಗುವುದು ಮತ್ತು ವಿಕೇಂದ್ರೀಕೃತ ಮೌಲ್ಯಮಾಪನ ಕೇಂದ್ರಗಳಲ್ಲಿ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕಾರ್ಯವನ್ನು ದಿನಾಂಕ:29.12.2023 ರಿಂದ 04.01.2024 ರವರೆಗೆ ಜರುಗಿಸಲಾಗುವುದು.

ಕಾರ್ಯದರ್ಶಿ

ಇವರಿಗೆ,
ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ ಗಳ ಮುಖ್ಯ ಅಧೀಕ್ಷಕರು/ ಪ್ರಿನ್ಸಿಪಾಲರುಗಳಿಗೆ- ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ

ಪ್ರತಿ: 1. ಶ್ರೀ ಹರೀಶ ಶೆಟ್ಟಿ, ಪ್ರಾಂಶುಪಾಲರು, ಕರ್ನಾಟಕ ಸರ್ಕಾರಿ ಪಾಲಿಟೆಕ್ನಿಕ್, ಮಂಗಳೂರು- ಮಾಹಿತಿ & ಅಗತ್ಯ ಪೂರ್ವಸಿದ್ಧತೆಗಾಗಿ

2.ಇ-ಗವರ್ನೆನ್ಸ್ ವಿಭಾಗ – ವೆಬ್ ಸೈಟ್ ನಲ್ಲಿ ಪ್ರಕಟಿಸಲು
3. ಗಣಕ ಕೇಂದ್ರ – ಬಿಟಿಇಲಿಂಕ್ಸ್ ವೆಬ್ ಪೋರ್ಟಲ್ ನಲ್ಲಿ ಪ್ರಕಟಿಸಲು ಮತ್ತು ಅಗತ್ಯಕ್ರಮಕ್ಕಾಗಿ
4. ಆಯುಕ್ತರ ಆಪ್ತಶಾಖೆ -ಅವಗಾಹನೆಗಾಗಿ
5. ನಿರ್ದೇಶಕರ ಆಪ್ತಶಾಖೆ -ಅವಗಾಹನೆಗಾಗಿ
6.ಇಎಪಿ ವಿಭಾಗ -ಮಾಹಿತಿಗಾಗಿ